# ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 176 ಎಂಎನ್ ಯು 2021 (ಭಾಗ-01)   ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 31-05-2021

## ಅಧಿಸೂಚನೆ

ಬಿಬಿಎಂಪಿ ವ್ಯಾಪ್ತಿಯ ಸಾರ್ವಜನಿಕರ ಅನುಕೂಲಕ್ಕಾಗಿ ಸರ್ಕಾರದ ಪತ್ರ ಸಂಖ್ಯೆ: ನಅಇ 176 ಎಂಎನ್ ಯು 2021, ದಿನಾಂಕ: 10-05-2021 ರ ಪತ್ರದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಡಳಿತ ವ್ಯಾಪ್ತಿಯಲ್ಲಿ 2021-22ನೇ ಸಾಲಿನ ಆಸ್ತಿ ತೆರಿಗೆಯನ್ನು ಪೂರ್ಣವಾಗಿ ಪಾವತಿಸುವವರಿಗೆ ಶೇಕಡಾ 5% ರಷ್ಟು ರಿಯಾಯಿತಿ ನೀಡುವ ಅವಧಿಯನ್ನು 31 ದಿನಗಳಿಗೆ ವಿಸ್ತರಿಸಿ ಅಂದರೆ ದಿನಾಂಕ: 31-05-2021ರ ಒಳಗೆ ಪಾವತಿಸುವ ಎಲ್ಲಾ ಆಸ್ತಿ ತೆರಿಗೆದಾರರಿಗೆ ಶೇ 5% ರಷ್ಟು ರಿಯಾಯಿತಿ ನೀಡಿ ಸರ್ಕಾರದ ಅನುಮೋದನೆ ನೀಡಲಾಗಿತ್ತು.

ಆದರೆ ಪ್ರಸ್ತುತ ಬೆಂಗಳೂರು ಮಹಾನಗರದಲ್ಲಿ ಕೊರೋನಾ/ಕೋವಿಡ್-19 ವ್ಯಾಪಕವಾಗಿ ಹರಡಿದ್ದು, ಪರಿಸ್ಥಿತಿಯು ಗಂಭೀರವಾಗಿರುವ ಹಿನ್ನಲೆಯಲ್ಲಿ ನಿಯಂತ್ರಣಕ್ಕಾಗಿ ರಾಜ್ಯದಲ್ಲಿ ದಿನಾಂಕ:27-04-2021ರಿಂದ ದಿನಾಂಕ:07-06-2021ರವರೆಗೆ ನಿಷೇಧಾಜ್ಞೆ/ಲಾಕ್ ಡೌನ್ ಅನ್ನು ಜಾರಿಗೊಳಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ, ಬಿಬಿಎಂಪಿ ವ್ಯಾಪ್ತಿಯ ಸಾರ್ವಜನಿಕರ ಅನುಕೂಲಕ್ಕಾಗಿ ಹಾಗೂ ಪಾಲಿಕೆಯ ಆರ್ಥಿಕ ಹಿತದೃಷ್ಟಿಯಿಂದ 2021-22 ನೇ ಸಾಲಿನ ಆಸ್ತಿ ತೆರಿಗೆಯನ್ನು ಪೂರ್ಣವಾಗಿ ಪಾವತಿಸುವವರಿಗೆ ಶೇಕಡ 5 ರಷ್ಟು ರಿಯಾಯಿತಿ ನೀಡುವ ಅವಧಿಯನ್ನು ಇನ್ನೂ 30 ದಿನಗಳಿಗೆ ವಿಸ್ತರಿಸಿ ಅಂದರೆ ದಿನಾಂಕ: 30-06-2021ರ ಒಳಗೆ ಪಾವತಿಸುವ ಎಲ್ಲಾ ಆಸ್ತಿ ತೆರಿಗೆದಾರರಿಗೆ ಶೇ 5 ರಷ್ಟು ರಿಯಾಯಿತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ. ಎ. ಹಿದಾಯತ್ತುಲ್ಲ 31/5/2021

**(ಕೆ. ಎ. ಹಿದಾಯತ್ತುಲ್ಲ)**
ಸರ್ಕಾರದ ಜಂಟಿ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.
2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.